ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1697
ಮಾನ್ಯ ಸದಸ್ಯರ ಹೆಸರು	ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	23.03.2020
ಉತ್ತರಿಸುವ ಸಚಿವರು	ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	2019ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಉಚಿತ IAS/KAS/BANKING ತರಬೇತಿಯ ಪರೀಕ್ಷೆ ಬರೆದ ಸಾವಿರಾರು ಬಡ ಹಾಗೂ ಪ್ರತಿಭಾನ್ವಿತ ವಿದ್ಯಾರ್ಥಿಗಳು ಅದರ ಫಲಿತಾಂಶಕ್ಕಾಗಿ ಜಾತಕ ಪಕ್ಷಿಗಳಂತೆ ಕಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ.	2019-20ನೇ ಸಾಲಿಗೆ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಉಚಿತ IAS/KAS/BANKING ಪರೀಕ್ಷಾ ಪೂರ್ವ ತರಬೇತಿಯ ಆಯ್ಕೆಗೆ ನಡೆಸಿದ ಸಾಮಾನ್ಯ ಪ್ರವೇಶ ಪರೀಕ್ಷೆಯ ಫಲಿತಾಂಶವನ್ನು ಈಗಾಗಲೇ ಇಲಾಖಾ ವೆಬ್‌ಸೈಟ್ www.bcwd.kar.nic.in ನಲ್ಲಿ ಪ್ರಕಟಿಸಲಾಗಿದೆ.
ಆ)	ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳಿಗೆ ಒಂದೇ ದಿನದಂದು ಪರೀಕ್ಷೆ ನಡೆಸಿರುವುದು ನಿಜವಲ್ಲವೇ;	ಹೌದು, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ:08.09.2019ರಂದು ಸಮಾಜ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳಡಿ ಬರುವ ಅಭ್ಯರ್ಥಿಗಳಿಗೆ ಒಂದೇ ದಿನದಂದು ಪರೀಕ್ಷೆ ನಡೆಸಿರುತ್ತದೆ.
ಇ)	ಸಮಾಜ ಕಲ್ಯಾಣ ಇಲಾಖೆಯ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಫಲಿತಾಂಶವನ್ನು ಪ್ರಕಟಿಸಿದ್ದು, ಪ್ರಸ್ತುತ ತರಬೇತಿಯಲ್ಲಿ ನಿರತರಾಗಿದ್ದಾರೆ, OBC ಅಭ್ಯರ್ಥಿಗಳ ಫಲಿತಾಂಶವನ್ನು ಮಾತ್ರ ಪ್ರಕಟಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; ಹಾಗೂ ಈ ವಿಳಂಬ ನೀತಿಯನ್ನು ಅನುಸರಿಸಲು ಕಾರಣವೇನು? (ವಿವರ ನಿಡುವುದು)	ಈಗಾಗಲೇ ಇಲಾಖಾ ವೆಬ್ ಸೈಟ್ ನಲ್ಲಿ ಫಲಿತಾಂಶವನ್ನು ಪ್ರಕಟಿಸಲಾಗಿದೆ. ದಿನಾಂಕ:09.01.2020 ಹಾಗೂ 10.01.2020 ರಂದು ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆ ಹಾಗೂ ಕೌನ್ಸಿಲಿಂಗ್ ನಡೆಸಿ ಬ್ಯಾಂಕಿಂಗ್ ಪರೀಕ್ಷಾ ಪೂರ್ವ ತರಬೇತಿಗೆ 166 ಅಭ್ಯರ್ಥಿಗಳನ್ನು ವಿವಿಧ ತರಬೇತಿ ಸಂಸ್ಥೆಗಳಿಗೆ ನಿಯೋಜಿಸಲಾಗಿದೆ. ಐ.ಎ.ಎಸ್ ಪರೀಕ್ಷಾ ಪೂರ್ವ ತರಬೇತಿಗೆ ಸಂಬಂಧಿಸಿದಂತೆ ಸರ್ಕಾರದಿಂದ ಅನುಮತಿ ನೀಡಿದ್ದು, ದಿನಾಂಕ:16.03.2020 ರಂದು ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆ ಮತ್ತು ಕೌನ್ಸಿಲಿಂಗ್ ನಡೆಸಲು ಉದ್ದೇಶಿಸಲಾಗಿತ್ತು. ಆದರೆ ಕೋವಿಡ್-19 ಸೋಂಕು ರಾಜ್ಯದಲ್ಲಿ ಹರಡುತ್ತಿರುವ ಹಿನ್ನೆಲೆಯಲ್ಲಿ, ಪರಿಸ್ಥಿತಿಯನ್ನು ಅವಲೋಕಿಸಿ ದಿನಾಂಕ:23.03.2020 ರಂದು ಅಭ್ಯರ್ಥಿಗಳನ್ನು ಮೂಲ ದಾಖಲೆಗಳ ಪರಿಶೀಲನೆ ಮತ್ತು ಕೌನ್ಸಿಲಿಂಗ್ ಮೂಲಕ ವಿವಿಧ ತರಬೇತಿ ಸಂಸ್ಥೆಗಳಿಗೆ ಐ.ಎ.ಎಸ್ ಪರೀಕ್ಷಾ ಪೂರ್ವ ತರಬೇತಿಗಾಗಿ ನಿಯೋಜಿಸಲಾಗುವುದು.

ಸಂಖ್ಯೆ:ಹಿಂವಕ 229 ಬಿಎಂಎಸ್ 2020

(ಬಿ. ಶ್ರೀರಾಮುಲು)
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ